

ಅರುಣ ಪಿ. ಭಟ್ಟ

## ವಾರದ ಭವಿಷ್ಯ 27.2.2020ರಿಂದ 4.3.2020ರವರೆಗೆ




ಸಾಹಿತ್ಯ ಹಾಗೂ ಕನ್ಸಲ್ಟೆನ್ಸಿ ಕ್ಷೇತ್ರದವರಿಗೆ ಉತ್ತಮವಾದ ಪ್ರಗತಿ. ನಿಮ್ಮೊಳಗಿನ ತಾಜಾತನವನ್ನು ಹಾಗೇ ಉಳಿಸಿಕೊಳ್ಳಲು ನೆರವಾಗುತ್ತದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾದ ಪ್ರಗತಿ ಇದೆ. ಸಂಬಂಧಪಟ್ಟ ವಿಚಾರಗಳಲ್ಲಿ ನಿಮ್ಮ ಗಮನ ಚೆನ್ನಾಗಿರುತ್ತದೆ.

ಶುಭದಿನ 29. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಕೌಟುಂಬಿಕ ವಿಚಾರಗಳಲ್ಲಿ ಉತ್ತಮ ಪ್ರಗತಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಆರೋಗ್ಯ ಉತ್ತಮವಾಗಿ ಇರುತ್ತದೆ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ.

ಶುಭದಿನ 2. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.




ನೀವು ನಂಬಿದ ವಿಚಾರಗಳನ್ನು ಪ್ರಸ್ತುತಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಸ್ನೇಹಿತರು ಸಾಲ ಕೇಳಿದರು ಎಂದು ತಕ್ಷಣ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ.

ಶುಭದಿನ 27. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್‌ನಲ್ಲಿ ಪ್ರಕರಣ ಇದ್ದರೆ ಆ ಕಡೆ ಗಮನ ನೀಡಬೇಕು.

ಶುಭದಿನ 1. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ಕುಟುಂಬದಲ್ಲಿ ಸಂತಸ ಇರುತ್ತದೆ.

ಶುಭದಿನ 3. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಅದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ.

ಶುಭದಿನ 4. ಆದಿತ್ಯ ಹೃದಯ ಪಠಿಸಿರಿ.




ಈ ವಾರ ಹೆಚ್ಚು ಚಟುವಟಿಕೆಯಿಂದ ಇರಬೇಕು. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಬರುತ್ತದೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ.

ಶುಭದಿನ 2. ಚಂಡಿ ಪಾರಾಯಣ ಮಾಡಿರಿ.




ವಾರದ ಮೊದಲ ಭಾಗದಲ್ಲಿ ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಮನೆಯಲ್ಲಿ ಕಾರ್ಯಕ್ರಮ ಆಯೋಜಿಸುವ ಬಗ್ಗೆ ಆಲೋಚನೆ ಮಾಡುತ್ತೀರಿ.

ಶುಭದಿನ 1. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ಸಂದರ್ಶನದಲ್ಲಿ ಯಶ ಸಾಧಿಸುತ್ತಿರಿ.

ಶುಭದಿನ. 4. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ವಾರದ ಆರಂಭದಲ್ಲಿ ಪ್ರಗತಿಗೆ ದೊಡ್ಡ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಆಸೆ ಪೂರೈಸುತ್ತದೆ. ಉನ್ನತ ವಿದ್ಯಾಭ್ಯಾಸಕ್ಕಾಗಿ ಸ್ಥಳಾಂತರ ಆಗುವ ಸಾಧ್ಯತೆಗಳಿವೆ. ಸೋಂಕು, ಅಲರ್ಜಿ ಸಮಸ್ಯೆ ಇರುವವರು ಬಹಳ ಎಚ್ಚರಿಕೆಯಿಂದ ಇರಬೇಕು.

ಶುಭದಿನ 2. ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.




ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚು ಮಾಡಿಕೊಳ್ಳುತ್ತೀರಿ. ಮಕ್ಕಳಿಂದ ನಿಮಗೆ ಶುಭ ಸುದ್ದಿ ಇದೆ. ವೈಯಕ್ತಿಕ ಸಂಬಂಧವು ಸೌಹಾರ್ದಯುತವಾಗಿ ಇರುತ್ತದೆ. ಪ್ರೀತಿಪಾತ್ರರಿಗೆ ಮತ್ತಷ್ಟು ಹತ್ತಿರವಾಗುತ್ತೀರಿ.

ಶುಭದಿನ 2. ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.




ಈ ವಾರ ವೈಯಕ್ತಿಕ ಲಾಭ. ಇಂಟರವ್ಯೂಗಳಲ್ಲಿ ಅನುಕೂಲಕರ ಫಲಿತಾಂಶ ನಿರೀಕ್ಷಿಸಬಹುದು. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ವೈದ್ಯಕೀಯ, ಕಲೆ ಈ ರೀತಿಯ ವೃತ್ತಿಯಲಿ ಇರುವವರಿಗೆ ಅತ್ಯುತ್ತಮವಾದ ಲಾಭ ಇದೆ.

ಶುಭದಿನ 1. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.


DHEEPAM
LAMP OIL
BLEND OF 5 OILS

ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ

ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ

